Akashvani: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

16.04.2026 14.30hrs

*********

ಮುಖ್ಯಾಂಶಗಳು :

- ಪರಿಸರ ಸಂರಕ್ಷಣೆಯಲ್ಲಿ ಸಾಮಾಜಿಕ ಹೊಣೆಗಾರಿಕೆ ಪಾತ್ರ ಹಿರಿದು - ಸಚಿವ ಈಶ್ವರ ಖಂಡ್ರೆ
- ಮಹಾತ್ಮಗಾಂಧಿ ನಗರಾಭಿವೃದ್ಧಿ ಎರಡನೇ ಹಂತದ ಯೋಜನೆಗೆ ಇದೇ ೧೮ರಂದು ಶಿಲಾನ್ಯಾಸ - ವಿಧಾನಪರಿಷತ್ ಸದಸ್ಯ ಐವನ್ ಡಿಸೋಜಾ
- ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆ ಬಳಿ ಅಪಘಾತ; ಪ್ರಧಾನಮಂತ್ರಿಗಳಿಂದ ಪರಿಹಾರ ಘೋಷಣೆ
- ರಾಜ್ಯದಲ್ಲೇ ಅತಿ ಹೆಚ್ಚು ತಾಪಮಾನ ೪೫ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲು

***********

ಪ್ರಕೃತಿ, ಪರಿಸರ ಸಂರಕ್ಷಣೆ ಹಾಗೂ ಹಸಿರು ಹೊದಿಕೆ ಹೆಚ್ಚಳದಲ್ಲಿ ಸುಸ್ಥಿರ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಪಾತ್ರ ಹಿರಿದಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟ - ಎಫ್.ಕೆ.ಸಿಸಿಐ ಆಯೋಜಿಸಿದ್ದ ಶೃಂಗಸಭೆ ೨೦೨೬ರ ಪೂರ್ವಭಾವಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ತಾಪಮಾನ ಏರಿಕೆ ಹಾಗೂ ಹವಾಮಾನ ಬದಲಾವಣೆಯ ಪರಿಣಾಮಗಳ ಕಾಲಘಟ್ಟದಲ್ಲಿ ನಿಂತಿದ್ದು, ಈ ಸಂದರ್ಭದಲ್ಲಿ ಸುಸ್ಥಿರ ಅಭಿವೃದ್ಧಿ, ಹವಾಮಾನ ಚೇತರಿಕೆ ಮತ್ತು ಸಮಗ್ರ ಪ್ರಗತಿಯ ಕಾರ್ಯತಂತ್ರಕ್ಕೆ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಚಾಲಕಶಕ್ತಿಯಾಗಿದೆ ಎಂದರು. ಕರ್ನಾಟಕವು ಈ ಪಯಣದಲ್ಲಿ ವಿಶಿಷ್ಟ ಸ್ಥಾನದಲ್ಲಿದೆ. ಜಾಗತಿಕ ಜೀವವೈವಿಧ್ಯತೆಯ ಅದ್ಭುತ ತಾಣವಾದ ಪಶ್ಚಿಮ ಘಟ್ಟಗಳನ್ನು ಹೊಂದಿದ್ದು, ಹಲವು ಬಗೆಯ ವಿಶಿಷ್ಟ ಸಸ್ಯ ಸಂಕುಲ, ಪ್ರಾಣಿ ಸಂಕುಲ, ಪಕ್ಷಿ ಸಂಕುಲ ಹಾಗೂ ಕೀಟ ಸಂಕುಲಗಳ ತಾಣವಾದ ಈ ಸಮೃದ್ಧ ಕಾನನವನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.ಹಲವು ಜೀವನದಿಗಳ ಮೂಲವೇ ಪಶ್ಚಿಮಘಟ್ಟವಾಗಿದ್ದು, ಮಳೆಯ ಮಾರುತಗಳನ್ನು ತಡೆದು ದೇಶಾದ್ಯಂತ ವ್ಯಾಪಕವಾಗಿ ಮಳೆ ಸುರಿಸುವಂತೆ ಮಾಡುವ ಪಶ್ಚಿಮ ಘಟ್ಟಗಳನ್ನು ಉದ್ದಿಮೆದಾರರು ಕೇವಲ ಒಂದು ಸಂಪನ್ಮೂಲವಾಗಿ ನೋಡದೆ, ಭವಿಷ್ಯದ ಪೀಳಿಗೆಯ ಜೀವನಾಡಿಯಾಗಿ ನೋಡಬೇಕು ಎಂದು ಹೇಳಿದರು.

***********

ಮಹಾತ್ಮಗಾಂಧಿ ನಗರಾಭಿವೃದ್ಧಿ ಎರಡನೇ ಹಂತದ ಯೋಜನೆಯಡಿ ರಾಜ್ಯ ಸರ್ಕಾರದಿಂದ ಮಂಗಳೂರು ಮಹಾನಗರ ಪಾಲಿಕೆಗೆ ೧೬೫ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿಗಳ ಶಿಲಾನ್ಯಾಸ ಕಾರ್ಯಕ್ರಮ ಇದೇ ೧೮ರಂದು ನಡೆಯಲಿದೆ ಎಂದು ವಿಧಾನಪರಿಷತ್ ಸದಸ್ಯ ಐವನ್ ಡಿಸೋಜಾ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಮರವೂರು ಸೇತುವೆ ಬಳಿ ೩ ಕೋಟಿ ರೂಪಾಯಿ ವೆಚ್ಚದ ಕಾಮಗಾರಿ, ವೆಲೆನ್ಸಿಯಾ ಚರ್ಚ್ ಬಳಿ ೧.೯೫ ಕೋಟಿ ರೂಪಾಯಿ ವೆಚ್ಚದ ಕಾಮಗಾರಿ, ಚಿಲಿಂಬಿಗುಡ್ಡೆ ಬಳಿ ೨ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗಳಿಗೆ ಅವರು ಚಾಲನೆ ನೀಡುವರು ಎಂದರು. ಮಂಗಳೂರು ನಗರದಲ್ಲಿ ಒಳಚರಂಡಿ ಸಮಸ್ಯೆ ಸಾಕಷ್ಟು ಬಿಗಡಾಯಿಸಿದೆ. ನದಿ, ಬಾವಿ ಸೇರಿದಂತೆ ಜಲಮೂಲಗಳು ಒಳಚರಂಡಿ ನೀರಿನಿಂದಾಗಿ ಕಲುಷಿತವಾಗಿವೆ. ಈ ನಿಟ್ಟಿನಲ್ಲಿ ಒಂದು ಸಾವಿರದ ೨೫೦ ಕೋಟಿ ರೂಪಾಯಿಗಳ ಸಮಗ್ರ ಒಳಚರಂಡಿ ಯೋಜನೆಗೆ ಡಿಪಿಆರ್ ಸರ್ಕಾರಕ್ಕೆ ಸಲ್ಲಿಕೆಯಾಗಿದೆ. ಈ ಯೋಜನೆ ಅನುಷ್ಠಾನದ ನಿಟ್ಟಿನಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಒಟ್ಟಾಗಿ ರಾಜ್ಯ ಸರ್ಕಾರವನ್ನು ಮನವರಿಕೆ ಮಾಡಬೇಕಾಗಿದೆ ಎಂದು ಐವನ್ ಡಿಸೋಜಾ ಹೇಳಿದರು.

***********

ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಚಿಲಕಲಡೋನ ಗ್ರಾಮದ ಸಮೀಪ ಇಂದು ಬೆಳಗ್ಗೆ ಬುಲೆರೋ ಹಾಗೂ ಟ್ಯಾಂಕರ್ ವಾಹನಗಳ ನಡುವೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಐವರು ಮಹಿಳೆಯರು ಸೇರಿ ಒಟ್ಟು ೮ ಮಂದಿ ಸಾವನ್ನಪ್ಪಿದ್ದು, ೧೩ ಮಂದಿ ಗಂಭೀರವಾಗಿ ಗಾಯಗೊಂಡವರನ್ನು ಕರ್ನೂಲ್ ಜಿಲ್ಲಾಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ನೀಡಲಾಗುತ್ತಿದೆ. ಮೃತರು ಚಿಕ್ಕಮಗಳೂರಿನವರಾಗಿದ್ದು, ಮಂತ್ರಾಲಯದ ರಾಘವೇಂದ್ರಸ್ವಾಮಿ ದರ್ಶನಕ್ಕೆಂದು ೨೧ ಮಂದಿ ತೆರಳುವ ವೇಳೆ ಈ ಅಪಘಾತ ಸಂಭವಿಸಿದೆ. ಅಪಘಾತದ ಬಗ್ಗೆ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ದುಃಖ ವ್ಯಕ್ತಪಡಿಸಿದ್ದು, ಗಾಯಾಳುಗಳಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ ನೀಡುವಂತೆ ಮತ್ತು ಮೃತರ ಕುಟುಂಬಗಳಿಗೆ ಸಹಾಯವನ್ನು ನೀಡುವಂತೆ ಅವರು ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ಮಧ್ಯೆ, ಪ್ರಧಾನಿ ನರೇಂದ್ರ ಮೋದಿ ಅಪಘಾತದಲ್ಲಿ ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದು, ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ. ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಕುಟುಂಬಕ್ಕೆ ೨ ಲಕ್ಷ ರೂಪಾಯಿ ಹಾಗೂ ಗಾಯಾಳುಗಳಿಗೆ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

***********

ಕಲಬುರಗಿಯ ಔರಾದ್ ಹೋಬಳಿಯಲ್ಲಿ ನಿನ್ನೆ ೪೫ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದ್ದು, ಇದು ರಾಜ್ಯದಲ್ಲೇ ಅತಿ ಹೆಚ್ಚು ತಾಪಮಾನವಾಗಿದೆ ಎಂದು ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ಮಾಹಿತಿ ನೀಡಿದೆ. ಕಲಬುರಗಿ ಜಿಲ್ಲೆಯಷ್ಟೇ ಅಲ್ಲದೆ, ಸುತ್ತಮುತ್ತಲಿನ ಪ್ರದೇಶಗಳಲ್ಲಿಯೂ ಬಿಸಿಲಿನ ತೀವ್ರತೆ ಹೆಚ್ಚಾಗಿದ್ದು, ಚಿಂಚೋಳಿ ತಾಲೂಕಿನ ಐನಾಪುರ ಹೋಬಳಿ ಮತ್ತು ಅಫ್ಜಲ್ಪುರ ತಾಲೂಕಿನ ಅತನೂರು ಹೋಬಳಿಗಳಲ್ಲಿ ತಲಾ ೪೪.೩ ಡಿಗ್ರಿ ತಾಪಮಾನ ದಾಖಲಾಗಿದೆ ಹಾಗೂ ಆಳಂದ ತಾಲೂಕಿನ ಮದನ ಹಿಪ್ಪರಗಾ ಹೋಬಳಿಯಲ್ಲಿ ೪೪.೧ ಡಿಗ್ರಿ ಉಷ್ಣಾಂಶ ದಾಖಲಾಗಿದೆ. ಈ ಹಿನ್ನೆಲೆಯಲ್ಲಿ ಕಲಬುರಗಿಯಲ್ಲಿ ನಾಳೆವರೆಗೆ 'ಆರೆಂಜ್ ಹೀಟ್ ವೇವ್ ಅಲರ್ಟ್' ಘೋಷಿಸಿದ್ದು, ಸಾರ್ವಜನಿಕರಿಗೆ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸಲು ಸೂಚನೆ ನೀಡಲಾಗಿದೆ.

***********

"ಕೇಂದ್ರ ಸರ್ಕಾರ ಜಾರಿಗೆ ತಂದಿರುವ 'ನಾರಿ ಶಕ್ತಿ ವಂದನಾ ಕಾಯ್ದೆ'ಯು ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಹೊಸ ಯುಗದ ಉದಯವಾಗಿದೆ ಎಂದು ದಾವಣಗೆರೆ ಜಿಲ್ಲಾ ಮಹಿಳಾ ನಾಯಕಿ ಗಾಯತ್ರಿ ಜಿ.ಎಂ.ಸಿದ್ದೇಶ್ವರ್ ಅಭಿಪ್ರಾಯಪಟ್ಟರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಇದು ಕೇವಲ ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿ ನೀಡುವ ಕ್ರಮವಷ್ಟೇ ಅಲ್ಲ; ಬದಲಿಗೆ ದೇಶದ ನೀತಿ ನಿರೂಪಣೆಯಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಿ, ಆಡಳಿತವನ್ನು ಮತ್ತಷ್ಟು ಸಮಗ್ರ ಹಾಗೂ ಪರಿಣಾಮಕಾರಿಯಾಗಿಸುವ ಐತಿಹಾಸಿಕ ಹೆಜ್ಜೆಯಾಗಿದೆ ಎಂದರು. "ಮಹಿಳಾ ನೇತೃತ್ವದ ಅಭಿವೃದ್ಧಿಯಿಂದ ಮಾತ್ರ ಭಾರತವನ್ನು ಜಾಗತಿಕ ಮಟ್ಟದಲ್ಲಿ ಉನ್ನತ ಸ್ಥಾನಕ್ಕೇರಿಸಲು ಸಾಧ್ಯ ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಆಶಯಕ್ಕೆ ಈ ಕಾಯ್ದೆ ಪೂರಕವಾಗಿದೆ," ಎಂದು ಅವರು ಪ್ರತಿಪಾದಿಸಿದರು. ಮಹಿಳಾ ಸಬಲೀಕರಣ ಮತ್ತು ಹಕ್ಕುಗಳ ರಕ್ಷಣೆಗಾಗಿ ಗಮನಹರಿಸುತ್ತದೆ. ಎಂದು ವಿಜಯಪುರದ ಅಕ್ಕನ ಅರಿವು ಬಳಗದ ಸದಸ್ಯೆ ಸವಿತಾ ಅಭಿಪ್ರಾಯಪಟ್ಟಿದ್ದಾರೆ.

***********

ಕೋಲಾರ ಜಿಲ್ಲೆಯಲ್ಲಿ ಅರಣ್ಯ ಪ್ರದೇಶದ ಪ್ರಮಾಣ ಕೇವಲ ಶೇಕಡ ೪ ರಷ್ಟಿದ್ದು, ಬೇಸಿಗೆಯ ಬಿಸಿಲಿಗೆ ಒಣಗುತ್ತಿರುವ ಅರಣ್ಯವನ್ನು ಕಾಡ್ಗಿಚ್ಚಿನಿಂದ ರಕ್ಷಿಸಲು ಜಿಲ್ಲಾ ಅರಣ್ಯ ಇಲಾಖೆಯು 'ಬೆಂಕಿ ರೇಖೆ' ನಿರ್ಮಾಣದಂತಹ ವೈಜ್ಞಾನಿಕ ಕ್ರಮಗಳಿಗೆ ಮುಂದಾಗಿದೆ. ಕೋಲಾರದಂತಹ ಒಣ ಹವಾಮಾನವಿರುವ ಜಿಲ್ಲೆಗಳಲ್ಲಿ ಬೇಸಿಗೆಯ ಅವಧಿಯಲ್ಲಿ ಅರಣ್ಯ ರಕ್ಷಣೆ ಅತ್ಯಂತ ನಿರ್ಣಾಯಕವಾಗಿರುತ್ತದೆ. ಇದಕ್ಕಾಗಿ ಅರಣ್ಯ ಇಲಾಖೆಯು ಬೇಸಿಗೆ ಆರಂಭಕ್ಕೂ ಮುನ್ನವೇ ಮುನ್ನೆಚ್ಚರಿಕೆ ಕ್ರಮವಾಗಿ ಬೆಂಕಿ ರೇಖೆಗಳನ್ನು ನಿರ್ಮಿಸುತ್ತಿದೆ. ಅರಣ್ಯದ ಮಧ್ಯೆ ೫ ರಿಂದ ೧೦

ಮೀಟರ್‌ಗಳಷ್ಟು ಅಗಲಕ್ಕೆ ಭೂಮಿಯನ್ನು ಸೀಳಿ, ಅಲ್ಲಿರುವ ಗಿಡಗಂಟೆ, ಒಣಗಿದ ಎಲೆ ಮತ್ತು ಹುಲ್ಲನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಲಾಗುತ್ತದೆ. ಒಂದು ಭಾಗದಲ್ಲಿ ಬೆಂಕಿ ಕಾಣಿಸಿಕೊಂಡರೆ, ಅದು ಪಕ್ಕದ ಭಾಗಕ್ಕೆ ವ್ಯಾಪಿಸದಂತೆ ತಡೆಯಲು ಈ ರೇಖೆಗಳು ಸಹಾಯ ಮಾಡುತ್ತವೆ. ಬೆಂಕಿಯ ತೀವ್ರತೆ ಕಡಿಮೆಯಾಗುವುದರಿಂದ ವನ್ಯಜೀವಿಗಳು ಸುರಕ್ಷಿತ ಸ್ಥಳಗಳಿಗೆ ತೆರಳಲು ಕಾಲಾವಕಾಶ ದೊರೆಯಲಿದೆ.

***********

ಶಿವಮೊಗ್ಗ ಜಿಲ್ಲೆಯ ಮಲೆನಾಡು ಭಾಗಗಳಾದ ಸಾಗರ, ಹೊಸನಗರ ಮತ್ತು ತೀರ್ಥಹಳ್ಳಿ ತಾಲೂಕುಗಳಲ್ಲಿ ಮಂಗನ ಕಾಯಿಲೆ ಪ್ರಕರಣಗಳು ವರದಿಯಾಗುತ್ತಿದ್ದು, ಸಾರ್ವಜನಿಕರು ತೀವ್ರ ಜಾಗೃತಿ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ನಟರಾಜ್ ಕೆ.ಎಸ್. ಅವರು ತಿಳಿಸಿದ್ದಾರೆ. ತೀರ್ಥಹಳ್ಳಿ ತಾಲೂಕಿನ ಅರಳಸುರುಳಿ, ಮೇಗರವಳ್ಳಿ, ಕಟಗಾರು, ಹಾರೋಗುಳಿಗೆ ಸೇರಿದಂತೆ ಇನ್ನುಳಿದ ಭಾಗಗಳಲ್ಲಿ ಈಗಾಗಲೇ ವ್ಯಾಪಕ ಮುಂಜಾಗ್ರತಾ ಕ್ರಮ ವಹಿಸಲು ಜನರಿಗೆ ಆರೋಗ್ಯ ಶಿಕ್ಷಣ ಹಾಗೂ ಮಾಹಿತಿ ನೀಡಲಾಗಿದೆ.

***********

ಬೆಳಗಾವಿ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಆಗದಂತೆ ನಿಗಾವಹಿಸುವುದರ ಜೊತೆಗೆ ಸಾಧ್ಯವಾದಷ್ಟು ರಸಗೊಬ್ಬರಗಳ ಬಳಕೆ ಕಡಿಮೆ ಮಾಡುವಂತೆ ರೈತರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ನಡೆದ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಸಮರ್ಪಕ ಪೂರೈಕೆ ಹಾಗೂ ಭೂ ತಾಯಿ ರಕ್ಷಣೆ ಕಣ್ಗಾವಲು ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಬಾರಿ ಜಿಲ್ಲೆಯಲ್ಲಿ ರಸಗೊಬ್ಬರ ಬಳಕೆಯಲ್ಲಿ ಕಡಿಮೆ ಆಗಿದ್ದು, ಈ ಬಾರಿಯು ಅಧಿಕಾರಿಗಳು, ರಸಗೊಬ್ಬರ ಪೂರೈಕೆದಾರರು ಸಮನ್ವಯ ಸಾಧಿಸಿ ರೈತರಲ್ಲಿ ರಸಗೊಬ್ಬರ ಬಳಕೆಯನ್ನು ಕಡಿಮೆ ಮಾಡಲು ಜಾಗೃತಿ ಮೂಡಿಸಬೇಕು ಎಂದರು.

******END*****